ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

---

**ಸಂಖ್ಯೆ : ವಾಇ : ಜಂ ನಿ : ಸುಮಪ : 2021–22** **ದಿನಾಂಕ : 29–09–2021**

## ಮಾಧ್ಯಮ ಆಹ್ವಾನ
## Media Invitation

**ವಿಶ್ವ ಹಿರಿಯ ನಾಗರಿಕರ ದಿನಾಚರಣೆ ಅಂಗವಾಗಿ ಹಿರಿಯ ನಾಗರಿಕರಿಗೆ ಪ್ರಶಸ್ತಿ ಪ್ರದಾನ ಕಾರ್ಯಕ್ರಮ ಹಾಗೂ ಪತ್ರಿಕಾಗೋಷ್ಠಿ:**

**ಹಾಲಪ್ಪ ಬಸಪ್ಪ ಆಚಾರ್**
**ಗಣಿ ಮತ್ತು ಭೂವಿಜ್ಞಾನ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ,**
**ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಸಚಿವರು.**

**ದಿನಾಂಕ: 30–09–2021 ಗುರುವಾರ, ಸಮಯ: ಅಪರಾಹ್ನ 12.30 ಗಂಟೆಗೆ**

**ಸ್ಥಳ: ಕೊಠಡಿ ಸಂಖ್ಯೆ: 334, ವಿಧಾನಸೌಧ, ಬೆಂಗಳೂರು.**

# ಪತ್ರಿಕಾ ಪ್ರಕಟಣೆ
**PRESS RELEASE**

## 2020 ಮತ್ತು 2021 ಸಾಲಿಗೆ "ಮಹಾತ್ಮ ಗಾಂಧಿ ಸೇವಾ ಪ್ರಶಸ್ತಿ – ಕರ್ನಾಟಕ" ಪ್ರಕಟ

ಬೆಂಗಳೂರು, ಸೆಪ್ಟೆಂಬರ್ 29 (ಕರ್ನಾಟಕ ವಾರ್ತೆ):

ರಾಷ್ಟ್ರಪಿತ ಮಹಾತ್ಮ ಗಾಂಧೀಜಿ ಜಯಂತಿಯನ್ನು ಸರ್ಕಾರಿ ಕಾರ್ಯಕ್ರಮವನ್ನಾಗಿ ರಾಜ್ಯಾದ್ಯಂತ ಅರ್ಥಪೂರ್ಣವಾಗಿ ಆಚರಿಸಲು ಗಾಂಧೀ ತತ್ವಾದರ್ಶಗಳನ್ನು ಆಧರಿಸಿಕೊಂಡು ಸಮಾಜದಲ್ಲಿ ಗಣನೀಯ ಸೇವೆ ಮಾಡಿದ ಗಣ್ಯರನ್ನು ಗುರುತಿಸಿ ಗೌರವಿಸಲು ಕರ್ನಾಟಕ ಸರ್ಕಾರ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ವತಿಯಿಂದ ನೀಡುವ **"ಮಹಾತ್ಮ ಗಾಂಧಿ ಸೇವಾ ಪ್ರಶಸ್ತಿ–ಕರ್ನಾಟಕ"** 2020 ಮತ್ತು 2021 ನೇ ಸಾಲಿಗೆ ಪ್ರಶಸ್ತಿಗಳನ್ನು ಪ್ರಕಟಿಸಿದೆ.

ಕೋವಿಡ್– 19ರ ಹಿನ್ನಲೆಯಲ್ಲಿ ಕಳೆದ ವರ್ಷದ ಪ್ರಶಸ್ತಿಯನ್ನು ಸರ್ಕಾರ ಪ್ರಕಟಿಸಿರಲಿಲ್ಲ, ಈ ವರ್ಷ ಕೋವಿಡ್ ಪ್ರಕರಣ ಕಡಿಮೆಯಾಗುತ್ತಾ ಬಂದಿರುವ ಹಿನ್ನೆಲೆಯಲ್ಲಿ, ಸರ್ಕಾರವು ಸದರಿ ಪ್ರಶಸ್ತಿಗಳನ್ನು ಪ್ರದಾನ ಮಾಡಲು ಇಚ್ಛಿಸಿದ್ದು, ಪ್ರಶಸ್ತಿಗೆ ಅರ್ಹರನ್ನು ಆಯ್ಕೆ ಮಾಡಲು ಕರ್ನಾಟಕ ಉಚ್ಚ ನ್ಯಾಯಾಲಯದ ವಿಶ್ರಾಂತ ನ್ಯಾಯಮೂರ್ತಿ ಶ್ರೀ ಅಶೋಕ್ ಬಂಗಾರೆಪ್ಪಾ ಹಿಂಚಿಗೇರಿ ಇವರ ಅಧ್ಯಕ್ಷತೆಯಲ್ಲಿ ಆಯ್ಕೆ ಸಮಿತಿಯನ್ನು ರಚಿಸಲಾಗಿತ್ತು. ಆಯ್ಕೆ ಸಮಿತಿಯು 2020 ರ ಸಾಲಿಗೆ ಬಾಗಲಕೋಟೆ ಜಿಲ್ಲೆಯ ಸ್ವಾತಂತ್ರ್ಯ ಹೋರಾಟಗಾರರಾದ **"ಶ್ರೀಮತಿ ಮೀರಾಬಾಯಿ ಕೊಪ್ಪಿಕರ್"** ಮತ್ತು 2021 ನೇ ಸಾಲಿಗೆ **"ಶ್ರೀ ಸಿದ್ಧಗಂಗಾ ಶಿಕ್ಷಣ ಸಂಸ್ಥೆ ಹಾಗೂ ಶ್ರೀ ಸಿದ್ಧಗಂಗಾ ಮಠ"**ವನ್ನು ಪ್ರಶಸ್ತಿಗೆ ಆಯ್ಕೆ ಮಾಡಿರುತ್ತದೆ.

ಅಕ್ಟೋಬರ್ 2 ರಂದು ರಾಷ್ಟ್ರಪಿತ ಮಹಾತ್ಮ ಗಾಂಧೀಜಿ ಜಯಂತಿಯಂದು ಬೆಂಗಳೂರಿನ ಗಾಂಧೀ ಭವನದಲ್ಲಿ ಹಮ್ಮಿಕೊಳ್ಳುವ ಕಾರ್ಯಕ್ರಮದಲ್ಲಿ ಪ್ರಶಸ್ತಿ ಪುರಸ್ಕೃತರಿಗೆ ತಲಾ ಐದು ಲಕ್ಷ ರೂ ನಗದು ಪುರಸ್ಕಾರ ಹಾಗೂ ಸ್ಮರಣಿಕೆಯನ್ನು ನೀಡಿ ಗೌರವಿಸಲಾಗುವುದು.

**ಶ್ರೀ ಸಿದ್ದಗಂಗಾ ಶಿಕ್ಷಣ ಸಂಸ್ಥೆ ಹಾಗೂ ಶ್ರೀ ಸಿದ್ದಗಂಗಾ ಮಠ:**

"ನಡೆದಾಡುವ ದೇವರು" ಎಂದೇ ಖ್ಯಾತರಾದ ಪರಮಪೂಜ್ಯ ಡಾ: ಶಿವಕುಮಾರ ಸ್ವಾಮೀಜಿಯವರ ಮಹದಾಶಯದಂತೆ ಸತತವಾಗಿ 80 ವರ್ಷಗಳ ಕಾಲ ಅನ್ನದಾಸೋಹ ಹಾಗೂ ಅಕ್ಷರ ದಾಸೋಹದ ತವರಾಗಿ ಜಾತಿ-ಧರ್ಮ ಬೇಧವಿಲ್ಲದೇ, ಪ್ರಾಂತ್ಯ-ಪ್ರದೇಶ ತಾರತಮ್ಯ ಮಾಡದೇ ಲಕ್ಷಾಂತರ ಮಕ್ಕಳಿಗೆ ಅನ್ನ, ಆಶ್ರಯ ಮತ್ತು ವಿದ್ಯೆಯನ್ನು ದಾನ ಮಾಡಿದ, ರಾಷ್ಟ್ರದಲ್ಲೇ ಪ್ರತಿಷ್ಠಿತ ಸಂಸ್ಥೆ ಎಂದು ಹೆಸರಾದ ಶ್ರೀ ಸಿದ್ದಗಂಗಾ ಶಿಕ್ಷಣ ಸಂಸ್ಥೆ ಹಾಗೂ ಶ್ರೀ ಸಿದ್ದಗಂಗಾ ಮಠ, ಕ್ಯಾತಸಂದ್ರ, ತುಮಕೂರು, ಸಾಧನೆಗಳ ತವರು.

**ಮೀರಾಬಾಯಿ ಕೊಪ್ಪಿಕರ್:**

ಶ್ರೀಮತಿ ಮೀರಾಬಾಯಿ ಕೊಪ್ಪಿಕರ್, ಹುಬ್ಬಳ್ಳಿಯ ಅತ್ಯಂತ ಶ್ರೀಮಂತರಾಗಿದ್ದ ಕೊಪ್ಪಿಕರ ವಂಶದ ಕುಡಿ. ಇವರಿಗೆ 96 ವರ್ಷ. ಸದ್ಯ ಮುಧೋಳದಲ್ಲಿರುವ ವಾತ್ಸಲ್ಯ ಧಾಮದಲ್ಲಿ ವಾಸ್ತವ್ಯ ಮಾಡುತ್ತಿದ್ದಾರೆ. ಪಕ್ಕಾ ಗಾಂಧಿವಾದಿಯಾಗಿದ್ದ ಇವರು ಇತ್ತೀಚಿನವರೆಗೂ ತಾವೇ ನೂಲು ನೇಯ್ದು ಅದರಲ್ಲಿ ವಸ್ತ್ರವನ್ನು ಮಾಡಿಕೊಳ್ಳುತ್ತಿದ್ದರು. ಈಗ ವಯಸ್ಸಾದ ನಿಮಿತ್ತ ನೇಯ್ಗೆ ಮಾಡುತ್ತಿಲ್ಲ.

ಗಾಂಧಿವಾದಿಗಳಾಗಿದ್ದ ಶ್ರೀಮತಿ ಮೀರಾಬಾಯಿ ಕೊಪ್ಪಿಕರ್ ಅವರು ಸ್ವಾತಂತ್ರ್ಯ ಹೋರಾಟದಲ್ಲಿ ಪಾಲ್ಗೊಂಡಿದ್ದರು. ಸಬರಮತಿ ಆಶ್ರಮದಲ್ಲಿ ಇದ್ದರು. ವಿನೋಬಾ ಭಾವೆಯವರ ಜೊತೆಗೂಡಿ ಭೂದಾನ ಚಳವಳಿಯಲ್ಲಿ ಪಾಲ್ಗೊಂಡು, ಕರ್ನಾಟಕದಿಂದ ಒಟ್ಟು 40 ಸಾವಿರ ಎಕರೆ ಭೂಮಿಯನ್ನು ದಾನ ಮಾಡಿಸುವಲ್ಲಿ ಯಶಸ್ವಿಯಾದವರು.

ಯಾರಿಂದಲೂ ಏನನ್ನೂ ಅಪೇಕ್ಷೆ ಪಡದ ಮನೋಭಾವ ಹೊಂದಿರುವ ಇವರು "ಸಮಾಜಕ್ಕೆ ಏನನ್ನಾದರೂ ಕೊಡಬೇಕು ಹೊರತು ಏನನ್ನೂ ಬಯಸಬಾರದು" ಎನ್ನುವ ಮೂಲ ಧ್ಯೇಯ ಹೊಂದಿರುವ ವ್ಯಕ್ತಿತ್ವ ಇವರದು. ಸಾವಯವ ಕೃಷಿ ಮಾಡುತ್ತಿದ್ದ ಇವರು ತಾವೇ ಬೆಳೆದ ವಸ್ತುಗಳನ್ನು ಮಾರಿ ಅದರಲ್ಲಿ ಬಂದ ಆದಾಯದಿಂದ ಜೀವನ ಮಾಡುತ್ತಿದ್ದಾರೆ.

"ವಾತ್ಸಲ್ಯ ಧಾಮ" ವಿನೋಬಾ ಭಾವೆಯವರ ತಾಯಿ ಮೂಲ ಜಮಖಂಡಿಯವರಾದ ರುಕ್ಮಿಣಿ ಭಾವೆಯವರದ್ದು. ಮುಧೋದಲ್ಲಿ ಅವರು 2.5 ಎಕರೆ ಜಾಗವನ್ನು ಕೊಂಡು ಅದರಲ್ಲಿ ಆಶ್ರಮ ನಿರ್ಮಿಸಲಾಗಿದೆ. ಆರಂಭದಲ್ಲಿ 20 ಜನರಿದ್ದರು. ಈಗ ಮೂರು ಜನರಷ್ಟೇ ವಾಸ ಮಾಡುತ್ತಾರೆ. ಶ್ರೀಮತಿ ಮೀರಾಬಾಯಿ ಕೊಪ್ಪಿಕರ್ ಅವರನ್ನು ಸಂದರ್ಶಿಸಲು ಅತಿಥಿಗಳು ಆಗಾಗ್ಗೆ ಬರುತ್ತಿರುತ್ತಾರೆ. ಜಾತ್ಯಾತೀತ ಮನೋಭಾವದವರಾಗಿದ್ದಾರೆ.

2008 ರಲ್ಲಿ ಇವರಿಗೆ ರಾಜ್ಯೋತ್ಸವ ಪ್ರಶಸ್ತಿ ಲಭಿಸಿದೆ. ಪ್ರಶಸ್ತಿಯನ್ನು ಇವರಿಗೆ ಕೊಡಲು ಆಗಿನ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪನವರೇ ಆಶ್ರಮಕ್ಕೆ ಆಗಮಿಸಿ, ಚೆಕ್ ಹಾಗೂ ಮೂರು ಗ್ರಾಂ ಬಂಗಾರದ ಪದಕವನ್ನು ಕೊಟ್ಟಿದ್ದರು. ಅವರು ನೀಡಿ ಚೆಕ್ ಹಣ ಇನ್ನೂ ಬ್ಯಾಂಕ್‌ನಲ್ಲಿದ್ದು, ಅದನ್ನು ಜನತೆಯ ಕಲ್ಯಾಣಕ್ಕೆ ಬಳಸಲು ಹೇಳಿದ್ದಾರೆ. ಬಂಗಾರದ ಪದಕವನ್ನು ಬಡವರಿಗೆ ದಾನ ಮಾಡಿದ್ದಾರೆ.

ಛಾಯಾಚಿತ್ರ ಲಗತ್ತಿಸಿದೆ.)

## ರಾಜ್ಯೋತ್ಸವ ಪ್ರಶಸ್ತಿಗೆ ಸೇವಾಸಿಂಧು ಪೋರ್ಟಲ್‌ನಲ್ಲಿ ನಾಮನಿರ್ದೇಶನ

ಬೆಂಗಳೂರು, ಸೆಪ್ಟೆಂಬರ್ 29, (ಕರ್ನಾಟಕ ವಾರ್ತೆ):

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ 2021ನೇ ಸಾಲಿನ ರಾಜ್ಯೋತ್ಸವ ಪ್ರಶಸ್ತಿಗೆ ವಿವಿಧ ಕ್ಷೇತ್ರಗಳ ಸಾಧಕರ ಹೆಸರುಗಳನ್ನು ಸಾರ್ವಜನಿಕರು ಸೇವಾಸಿಂಧು ಪೋರ್ಟಲ್‌ನಲ್ಲಿ ನಾಮನಿರ್ದೇಶನ ಮಾಡಬಹುದಾಗಿದೆ.

ನಾಮನಿರ್ದೇಶನವು ಸೆಪ್ಟೆಂಬರ್ 15 ರಿಂದ ಪ್ರಾರಂಭವಾಗಿ ಅಕ್ಟೋಬರ್ 15ರವರೆಗೆ ಸಲ್ಲಿಸಬಹುದಾಗಿದೆ. ಸೇವಾಸಿಂಧು ಪೋರ್ಟಲ್‌ನ ವೆಬ್‌ಸೈಟ್ ವಿಳಾಸ: https://sevasindhu.karnataka.gov.in ನ್ನು ಸಂಪರ್ಕಿಸಬಹುದಾಗಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ವಸತಿ ಸಚಿವರ ಪರಿಷ್ಕೃತ ಪ್ರವಾಸ

ಬೆಂಗಳೂರು, ಸೆಪ್ಟೆಂಬರ್ 29 (ಕರ್ನಾಟಕ ವಾರ್ತೆ):

ವಸತಿ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರಾದ ವಿ.ಸೋಮಣ್ಣ ಅವರು ಅಕ್ಟೋಬರ್ 2 ರಂದು ಧಾರವಾಡ ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳಲಿದ್ದಾರೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದ್ದಾರೆ.

## ನಗರಾಭಿವೃದ್ಧಿ ಸಚಿವರ ಪ್ರವಾಸ

ಬೆಂಗಳೂರು, ಸೆಪ್ಟೆಂಬರ್ 29 (ಕರ್ನಾಟಕ ವಾರ್ತೆ):

ನಗರಾಭಿವೃದ್ಧಿ ಹಾಗೂ ದಾವಣಗೆರೆ ಜಿಲ್ಲಾ ಉಸ್ತುವಾರಿ ಸಚಿವರಾದ ಬಿ.ಎ.ಬಸವರಾಜ (ಬೈರತಿ) ಅವರು ಅಕ್ಟೋಬರ್ 01 ಮತ್ತು 02 ರಂದು ದಾವಣಗೆರೆ ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳಲಿದ್ದಾರೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದ್ದಾರೆ.

## ಬಿ.ಎಂ.ಟಿ.ಸಿ ಬಸ್ಸುಗಳಲ್ಲಿ ಟಿಕೇಟ್‌ನ್ನು ಪಡೆಯದೇ ಅನಧಿಕೃತವಾಗಿ ಪ್ರಯಾಣ ಮಾಡಿದವರಿಂದ ದಂಡ ವಸೂಲಿ

ಬೆಂಗಳೂರು, ಸೆಪ್ಟೆಂಬರ್ 29, (ಕರ್ನಾಟಕ ವಾರ್ತೆ):

ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ ವಾಹನಗಳಲ್ಲಿ ಸಂಚರಿಸುವ ಪ್ರಯಾಣಿಕರು ಟಿಕೇಟ್‌ನ್ನು ಪಡೆಯದೇ ಅನಧಿಕೃತವಾಗಿ ಪ್ರಯಾಣ ಮಾಡುವವರನ್ನು ಮತ್ತು ಸಂಸ್ಥೆಯ ಸಾರಿಗೆ ಆದಾಯದ ಸೋರಿಕೆಯನ್ನು ತಡೆಗಟ್ಟುವ ನಿಟ್ಟಿನಲ್ಲಿ, ನಗರದಾದ್ಯಂತ ಸಂಚರಿಸುವ ವಾಹನಗಳನ್ನು ಸಂಸ್ಥೆಯ ತನಿಖಾ ತಂಡಗಳು ಆಗಸ್ಟ್-2021 ರ ಮಾಹೆಯಲ್ಲಿ ಒಟ್ಟು 16,545 ಟ್ರಿಪ್‌ಗಳನ್ನು ತಪಾಸಿಸಿ 2259 ಟಿಕೇಟ್ ರಹಿತ ಪ್ರಯಾಣಿಕರನ್ನು ಪತ್ತೆ ಹಚ್ಚಿ, ಅವರಿಂದ ಒಟ್ಟು ರೂ. 3,56,400/- ದಂಡ ವಸೂಲಿ ಮಾಡಿ ಸಂಸ್ಥೆಯ ನಿರ್ವಾಹಕರ ವಿರುದ್ಧ 1500 ಪ್ರಕರಣಗಳನ್ನು ದಾಖಲಿಸಲಾಗಿದೆ.

ಮಹಿಳಾ ಪ್ರಯಾಣಿಕರಿಗೆಂದೇ ಮೀಸಲಾಗಿರುವ ಆಸನಗಳಲ್ಲಿ ಕುಳಿತು ಪ್ರಯಾಣಿಸುವ 08 ಪುರುಷ ಪ್ರಯಾಣಿಕರಿಂದ ಒಟ್ಟು ರೂ. 800/- ನ್ನು ಮೋಟಾರು ವಾಹನ ಕಾಯ್ದೆ 1988ರ ಕಾಲಂ 177 ಮತ್ತು 94 ರ ಪ್ರಕಾರ ದಂಡ ವಿಧಿಸಲಾಗಿದೆ. ಒಟ್ಟಾರೆಯಾಗಿ ಆಗಸ್ಟ್-2021ರ ಮಾಹೆಯಲ್ಲಿ 2267 ಪ್ರಯಾಣಿಕರಿಂದ ಒಟ್ಟು ರೂ. 3,57,200/- ದಂಡವನ್ನು ವಸೂಲಿ ಮಾಡಲಾಗಿದೆ.

ಪ್ರಯಾಣಿಕರು ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯ ವಾಹನಗಳಲ್ಲಿ ಪ್ರಯಾಣಿಸುವಾಗ ಅಧಿಕೃತ ಟಿಕೇಟ್/ ದಿನದ ಪಾಸು/ ಮಾಸಿಕ ಪಾಸುಗಳನ್ನು ಹೊಂದಿ ಪ್ರಯಾಣಿಸುವುದು. ಇದರಿಂದ ಅನಗತ್ಯ ದಂಡ ಕಟ್ಟುವುದನ್ನು ತಡೆಯಬಹುದಾಗಿದೆ ಹಾಗೂ ಇಂತಹ ಪ್ರವೃತ್ತಿಯಿಂದ ಸಂಸ್ಥೆಯು ಉತ್ತಮ ಸೇವೆಯನ್ನು ಪ್ರಯಾಣಿಕರಿಗೆ ನೀಡಲು ಸಹಾಯವಾಗುತ್ತದೆ. ಮಹಿಳಾ ಪ್ರಯಾಣಿಕಗರಿಗೆಂದೇ ಮೀಸಲಾಗಿರುವ ಆಸನಗಳಲ್ಲಿ ಪುರುಷ ಪ್ರಯಾಣಿಕರು ಆಸನಗಳನ್ನು ತೆರವು ಮಾಡಿಕೊಡುವ ಮೂಲಕ ಅವರಿಗೆ ಕುಳಿತುಕೊಳ್ಳಲು ಅವಕಾಶ ನೀಡಬೇಕೆಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಬೆಂಗಳೂರು-ಶಿರಡಿ ಮಾರ್ಗದಲ್ಲಿ ಅಂಬಾರಿ ಡ್ರೀಮ್ ಕ್ಲಾಸ್ ಸಾರಿಗೆ ಪುನರಾರಂಭ

ಬೆಂಗಳೂರು, ಸೆಪ್ಟೆಂಬರ್ 29, (ಕರ್ನಾಟಕ ವಾರ್ತೆ):

ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮವು ಬೆಂಗಳೂರು ಕೇಂದ್ರೀಯ ವಿಭಾಗದ ವತಿಯಿಂದ ಸಾರ್ವಜನಿಕ ಪ್ರಯಾಣಿಕರ ಅನುಕೂಲಕ್ಕಾಗಿ ಬೆಂಗಳೂರು-ಶಿರಡಿ ಮಾರ್ಗದಲ್ಲಿ ಅಂಬಾರಿ ಡ್ರೀಮ್ ಕ್ಲಾಸ್ (ಮಲ್ಟಿಆಕ್ಸಲ್ ಸ್ಲೀಪರ್) ಸಾರಿಗೆಯನ್ನು ಅಕ್ಟೋಬರ್ 6 ರಿಂದ ಪುನರಾರಂಭಿಸಲಾಗುವುದು. ಪ್ರಯಾಣದರ ವಯಸ್ಕರಿಗೆ ರೂ.1600/- ನಿಗಧಿಪಡಿಸಲಾಗಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ವಸತಿ ಸಚಿವರ ಪ್ರವಾಸ

ಬೆಂಗಳೂರು, ಸೆಪ್ಟೆಂಬರ್ 29 (ಕರ್ನಾಟಕ ವಾರ್ತೆ):

ವಸತಿ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರಾದ ವಿ.ಸೋಮಣ್ಣ ಅವರು ಅಕ್ಟೋಬರ್ 5 ರಂದು ಮೈಸೂರು ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡು ಅಂದೇ ಕೇಂದ್ರಸ್ಥಾನಕ್ಕೆ ವಾಪಸ್ಸಾಗಲಿದ್ದಾರೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದ್ದಾರೆ.

## ಬೆಂಗಳೂರು-ಹಂಪಿ -ತುಂಗಭದ್ರಾ ಡ್ಯಾಂ ಮಾರ್ಗದ ಪ್ರಾಕೇಜ್ ಟೂರ್

ಬೆಂಗಳೂರು, ಸೆಪ್ಟೆಂಬರ್ 29, (ಕರ್ನಾಟಕ ವಾರ್ತೆ):

ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮವು ಬೆಂಗಳೂರು ಕೇಂದ್ರೀಯ ವಿಭಾಗದ ವತಿಯಿಂದ ಸಾರ್ವಜನಿಕ ಪ್ರಯಾಣಿಕರ ಅನುಕೂಲಕ್ಕಾಗಿ ಬೆಂಗಳೂರು- ಹಂಪಿ-ತುಂಗಭದ್ರ ಡ್ಯಾಂ ಮಾರ್ಗದ ಪ್ಯಾಕೇಜ್ ಟೂರ್‌ನ್ನು ನಾನ್ ಎಸಿ ಸ್ಲೀಪರ್ ವಾಹನದೊಂದಿಗೆ ಅಕ್ಟೋಬರ್ 01 ರಿಂದ ಸಾರಿಗೆ ಸೇವೆಯನ್ನು ಪುನರಾರಂಭಿಸಲಾಗುವುದು.

ಈ ಪ್ಯಾಕೇಜ್‌ನಲ್ಲಿ "ಪ್ರೆಶ್ ಅಪ್, ಬೆಳಗಿನ ಉಪಹಾರ, ಮಧ್ಯಾಹ್ನದ ಊಟ, ರಾತ್ರಿ ಊಟದ ವ್ಯವಸ್ಥೆಯನ್ನು ಒಳಗೊಂಡಿರುತ್ತದೆ ಹಾಗೂ ಹಂಪಿ ವೀಕ್ಷಣೆಯ ಪ್ರವೇಶ ಶುಲ್ಕವನ್ನು ನಿಗಮದ ವತಿಯಿಂದ ಭರಿಸಲಾಗುವುದು. ಪ್ರಯಾಣದರ ವಯಸ್ಕರಿಗೆ ರೂ.2500/- ಹಾಗೂ 6 ರಿಂದ 12 ವರ್ಷದ ಮಕ್ಕಳಿಗೆ ರೂ. 2300/-ಗಳನ್ನು ನಿಗಧಿಪಡಿಸಲಾಗಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಪ್ರಥಮ ಪವಿತ್ರ ವೃಕ್ಷಗಳ ಹಬ್ಬ "ಕದಂಬ ವೃಕ್ಷೋತ್ಸವ"

ಬೆಂಗಳೂರು, ಸೆಪ್ಟೆಂಬರ್ 29, (ಕರ್ನಾಟಕ ವಾರ್ತೆ):

ಕರ್ನಾಟಕ ಪ್ರವಾಸೋದ್ಯಮ ಅಭಿವೃದ್ಧಿ ವತಿಯಿಂದ ಡಿಸ್ಕವರಿ ವಿಲೇಜ್ ಚಿಕ್ಕಬಳ್ಳಾಪುರದಲ್ಲಿ ಪ್ರಥಮ ಬಾರಿಗೆ ಕರ್ನಾಟಕ ವೃಕ್ಷಗಳ ಹಬ್ಬ – 2021ನ್ನು ಅಕ್ಟೋಬರ್ 03, 2021ರಂದು ನಂದಿಬೆಟ್ಟದಲ್ಲಿ "ಕದಂಬ ವೃಕ್ಷೋತ್ಸವ" ವನ್ನಾಗಿ ಆಚರಿಸಲಾಗುತ್ತಿದೆ.

ಕಾರ್ಯಕ್ರಮದ ಉದ್ಘಾಟನೆಯನ್ನು ಅರಣ್ಯ ಮತ್ತು ಆಹಾರ ನಾಗರೀಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ ಸಚಿವರಾದ ಉಮೇಶ್ ವಿಶ್ವನಾಥ್ ಕತ್ತಿ ಅವರು ಮಾಡಲಿದ್ದಾರೆ. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರಾದ ಡಾ.ಕೆ.ಸುಧಾಕರ್ ಅವರು ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಲಿರುವರು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಕೃಷಿ ವಿಶ್ವವಿದ್ಯಾನಿಲಯ ಬೆಂಗಳೂರು, ಜೆ.ಆರ್.ಎಫ್ ಪರೀಕ್ಷೆಯಲ್ಲಿ ದೇಶದಲ್ಲೇ ಪ್ರಥಮ

ಬೆಂಗಳೂರು, ಸೆಪ್ಟೆಂಬರ್ 29, (ಕರ್ನಾಟಕ ವಾರ್ತೆ):

ನವದೆಹಲಿಯ ಭಾರತೀಯ ಕೃಷಿ ಅನುಸಂಧಾನ ಪರಿಷತ್, ಪ್ರತಿ ವರ್ಷ ಅಖಿಲ ಭಾರತ ಮಟ್ಟದಲ್ಲಿ "ಕೃಷಿ ವಿಜ್ಞಾನಗಳು", "ತೋಟಗಾರಿಕೆ", "ಇಂಜಿನಿಯರಿಂಗ್ ಮತ್ತು ತಂತ್ರಜ್ಞಾನ" ಹಾಗೂ "ಪಶು ವೈದ್ಯಕೀಯ" ನಾಲ್ಕು ವಿಭಾಗಗಳಲ್ಲಿ ಕಿರಿಯ ಸಂಶೋಧನಾ ಫೆಲೋಷಿಪ್ (ಜೆಆರ್ಎಫ್)ಗೆ ಪರೀಕ್ಷೆಗಳನ್ನು ನಡೆಸುತ್ತದೆ. 2020–21ನೇ ಸಾಲಿನಲ್ಲಿ ರಾಷ್ಟ್ರದ 60 ಕೃಷಿ ವಿಶ್ವವಿದ್ಯಾನಿಲಯಗಳು, ಮೂರು ಕೇಂದ್ರೀಯ ಮತ್ತು ನಾಲ್ಕು ಡೀಮ್ಡ್ ಕೃಷಿ ವಿಶ್ವವಿದ್ಯಾನಿಲಯಗಳ ವಿದ್ಯಾರ್ಥಿಗಳು ಪರೀಕ್ಷೆಯಲ್ಲಿ ಭಾಗವಹಿಸಿದ್ದರು. ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರಿನ 38 ವಿದ್ಯಾರ್ಥಿಗಳು "ಕೃಷಿ ವಿಜ್ಞಾನಗಳು" ವಿಭಾಗ ಮತ್ತು 10 ವಿದ್ಯಾರ್ಥಿಗಳು "ಇಂಜಿನಿಯರಿಂಗ್ ಮತ್ತು ತಂತ್ರಜ್ಞಾನ" ವಿಭಾಗದಲ್ಲಿ ತೇರ್ಗಡೆ ಹೊಂದಿರುತ್ತಾರೆ. **"ಕೃಷಿ ವಿಜ್ಞಾನಗಳು"** ವಿಭಾಗ ಮತ್ತು **"ಇಂಜಿನಿಯರಿಂಗ್ ಮತ್ತು ತಂತ್ರಜ್ಞಾನ"** ವಿಭಾಗದಲ್ಲಿ ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು **ಪ್ರಥಮ ಸ್ಥಾನ**ಗಳಿಸುರುತ್ತದೆ. ನವದೆಹಲಿಯಲ್ಲಿ ಜರುಗಿದ ಪ್ರಶಸ್ತಿ ಪ್ರಧಾನ ಸಮಾರಂದಲ್ಲಿ ಕೃಷಿ ವಿಶ್ವವಿದ್ಯಾನಿಲಯ ಬೆಂಗಳೂರಿನ ಕುಲಪತಿಗಳಾದ **ಡಾ॥ ಎಸ್. ರಾಜೇಂದ್ರಪ್ರಸಾದ್ ರವರು ಡಾ॥ ತ್ರಿಲೋಚನ ಮೋಹಪಾತ್ರ,** ಕಾರ್ಯದರ್ಶಿಗಳು (ಡೇರ್) ಮತ್ತು ಮಹಾ ನಿರ್ದೇಶಕರು, ಭಾರತೀಯ ಕೃಷಿ ಅನುಸಂಧಾನ ಪರಿಷತ್, ನವದೆಹಲಿ ರವರಿಂದ ಪ್ರಶಸ್ತಿಯನ್ನು ಸ್ವೀಕರಿಸಿದರು.

## ಬೇಕರಿ ತರಬೇತಿ

ಬೆಂಗಳೂರು, ಸೆಪ್ಟೆಂಬರ್ 29, (ಕರ್ನಾಟಕ ವಾರ್ತೆ):

ಬೇಕರಿ ತರಭೇತಿ ಘಟಕದ ವತಿಯಿಂದ 4 ವಾರಗಳ ಬೇಕರಿ ತರಭೇತಿ ಕಾರ್ಯಕ್ರಮವನ್ನು ಆಸಕ್ತಿಯುಳ್ಳ ಬೇಕರಿದಾರರಿಗೆ ಉದ್ದಿಮೆ ಮತ್ತು ಗೃಹಿಣಿಯರಿಗಾಗಿ ಆಯೋಜಿಸಲಾಗಿದೆ.

ಬೇಕರಿ ತರಬೇತಿಯು ದಿನಾಂಕ **ಅಕ್ಟೋಬರ್ 04, 2021** ರಿಂದ ಪ್ರಾರಂಭವಾಗಲಿದೆ. ಈ ತರಬೇತಿಯಲ್ಲಿ ಬ್ರೆಡ್, ಬನ್, ಪಫ್ಸ್, ಕೇಕ್‌ಗಳು, ವಿಶೇಷ ಬಿಸ್ಕತ್ತುಗಳು, ರೋಲ್ಸ್‌ಗಳು ಮತ್ತಿತರ ಆಕರ್ಷಕ ಬೇಕರಿ ಪದಾರ್ಥಗಳನ್ನು ಕಲಿಸಲಾಗುವುದು.

ಅಭ್ಯರ್ಥಿಗಳು ಸ್ವತ: ಪದಾರ್ಥ ತಯಾರಿಸುವ ಮೂಲಕ ಕಲಿಯುವ ಸೌಲಭ್ಯವಿದೆ. ಯಾವುದೇ ವಿದ್ಯಾರ್ಹತೆ ಅವಶ್ಯಕತೆಯಿಲ್ಲ. ತಯಾರಿಕೆಗೆ ಬೇಕಾದ ಕಚ್ಚಾ ಪದಾರ್ಥಗಳನ್ನು ತರಬೇತಿ ಘಟಕದಲ್ಲೇ ಒದಗಿಸಲಾಗುವುದು.

ಹೆಚ್ಚಿನ ಮಾಹಿತಿಗಾಗಿ **ಸಂಯೋಜಕರು, ಬೇಕರಿ ತರಬೇತಿ ಕೇಂದ್ರ, ವಿಸ್ತರಣಾ ನಿರ್ದೇಶನಾಲಯ, ಕೃಷಿ ವಿಶ್ವವಿದ್ಯಾನಿಲಯ, ಹೆಬ್ಬಾಳ, ಬೆಂಗಳೂರು–560 024,** ಇವರನ್ನು ಖುದ್ದಾಗಿ ಅಥವಾ ದೂರವಾಣಿ ಸಂಖ್ಯೆ **23513370** ಮೂಲಕ ಕಚೇರಿಯ ಕೆಲಸದ ವೇಳೆಯಲ್ಲಿ ಸಂಪರ್ಕಿಸಬಹುದಾಗಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## BAKING COURSE

Bengaluru, September 29 (Karnataka Information):

The Bakery Training Unit, , Hebbal, Bangalore Is conducting ***4 weeks training course on Bakery Technology*** for the benefit of Housewives and Entrepreneurs from **04.10.2021**. Bakery products like special Biscuits, Bread Rolls, Puffs, Cakes and fancy items will be taught during the course. Participants will be allowed to learn by preparing the products by themselves. The interested persons can contact Coordinator in person or through telephone no. **23513370** during office hours.

## ಕೆಪಿಎಸ್‌ಸಿ: ಮೂಲದಾಖಲೆಗಳ ಪರಿಶೀಲನೆ ಮತ್ತು ಸಂದರ್ಶನ

ಬೆಂಗಳೂರು, ಸೆಪ್ಟೆಂಬರ್ 29, (ಕರ್ನಾಟಕ ವಾರ್ತೆ):

ಕರ್ನಾಟಕ ಲೋಕ ಸೇವಾ ಆಯೋಗವು ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆಯಲ್ಲಿನ 2017–18ನೇ ಸಾಲಿನ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ಗ್ರೂಪ್ – 'ಎ' ವೃಂದದ 24 ಹುದ್ದೆಗಳ ನೇಮಕಾತಿಗೆ ಸಂಬಂಧಿಸಿದಂತೆ ಅರ್ಹ ಅಭ್ಯರ್ಥಿಗಳಿಗೆ ಅಕ್ಟೋಬರ್ 11 ರಿಂದ ಅಕ್ಟೋಬರ್ 13, 2021ರವರೆಗೆ ಮೂಲ ದಾಖಲೆಗಳ ಪರಿಶೀಲನೆ ಮತ್ತು ಸಂದರ್ಶನವನ್ನು ಆಯೋಗದ ಕೇಂದ್ರ ಕಚೇರಿ, ಬೆಂಗಳೂರಿನಲ್ಲಿ ನಡೆಸಲು ನಿಗದಿಪಡಿಸಿದೆ.

ಅರ್ಹ ಅಭ್ಯರ್ಥಿಗಳಿಗೆ ಈಗಾಗಲೇ ಸಂದರ್ಶನ ಸೂಚನಾ ಪತ್ರಗಳನ್ನು ಕಳುಹಿಸಲಾಗಿದೆ. ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು ಮಾಹಿತಿಗಾಗಿ ಆಯೋಗದ ವೆಬ್‌ಸೈಟ್ ವಿಳಾಸ: http://kpsc.kar.nic.in/EligibilityList ನಲ್ಲಿ ಪ್ರಕಟಿಸಲಾಗಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

**ಬೆಂಗಳೂರು ನಗರದಲ್ಲಿ ಸ್ಥಾಪಿಸಿರುವ ವಾಯುಗುಣಮಟ್ಟ ಮಾಪನ ಕೇಂದ್ರಗಳ ವಾಯುಗುಣಮಟ್ಟ ಸೂಚ್ಯಂಕ**

ಬೆಂಗಳೂರು, ಸೆಪ್ಟೆಂಬರ್ 29, (ಕರ್ನಾಟಕ ವಾರ್ತೆ):

**ದಿನಾಂಕ: 29.9.2021 (Average of past 24 hours)**

| ಕ್ರಮ ಸಂಖ್ಯೆ | ಮಾಪನ ಕೇಂದ್ರಗಳ ಹೆಸರು | ವಾಯುಗುಣಮಟ್ಟ ಸೂಚ್ಯಂಕ (AQI) | ವರ್ಗ | ಪ್ರಮುಖ ಮಾಲಿನ್ಯಕಾರಕ |
|---|---|---|---|---|
| 1 | ಪಶುವೈದ್ಯಕೀಯಕಾಲೇಜು, ಹೆಬ್ಬಾಳ | 40 | ಉತ್ತಮ | $PM_{10}$ |
| 2 | ಜಯನಗರ 5ನೇ ಬ್ಲಾಕ್, ಶಾಲಿನಿ ಮೈದಾನ | 34 | ಉತ್ತಮ | $O_3$ |
| 3 | ಕವಿಕ, ಮೈಸೂರುರಸ್ತೆ | 195 | ಸಾಧಾರಣ | $PM_{2.5}$ |
| 4 | ರಾಜೀವ್‌ಗಾಂಧಿಎದೆರೋಗಗಳ ಸಂಸ್ಥೆ, ನಿಮ್ಹಾನ್ಸ್ ಹೊಂಬೇಗೌಡನಗರ | 34 | ಉತ್ತಮ | $PM_{10}$ |
| 5 | ಹೆಚ್.ಎಸ್.ಆರ್ ಲೇಔಟ್, ಕೇಂದ್ರರೇಷ್ಮೆ ಮಂಡಳಿ ಹತ್ತಿರ | 72 | ತೃಪ್ತಿಕರ | $PM_{10}$ |
| 6 | ನಗರರೈಲ್ವೆ ನಿಲ್ದಾಣ, ಮೆಜೆಸ್ಟಿಕ್, ಬೆಂಗಳೂರು | 59 | ತೃಪ್ತಿಕರ | $PM_{10}$ |
| 7 | ಸಾಣೆಗುರುವನಹಳ್ಳಿ, ನಿಸರ್ಗ ಭವನ, ಕರ್ನಾಟಕರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಶಿವನಗರ | 40 | ಉತ್ತಮ | CO |
| **(29.9.2021 at 10.05 AM)** | | | | |
| 8 | BWSSB,ಕಾಡಬೀಸನಹಳ್ಳಿ | 56 | ತೃಪ್ತಿಕರ | $SO_2$ |
| 9 | ಪೀಣ್ಯ | 67 | ತೃಪ್ತಿಕರ | $PM_{10}$ |
| 10 | ಬಿಟಿಎಂ ಲೇಔಟ್ | * | * | * |

| ವರ್ಗ(ಶ್ರೇಣಿ) | ಉಂಟಾಗಬಹುದಾದಆರೋಗ್ಯ ಪರಿಣಾಮಗಳು |
|---|---|
| **ಉತ್ತಮ (0–50)** | ಕನಿಷ್ಠ ಪರಿಣಾಮ |
| **ತೃಪ್ತಿಕರ (51–100)** | ಸೂಕ್ಷ್ಮ ಜನರಿಗೆ ಸಣ್ಣ ಉಸಿರಾಟದ ಅಸ್ವಸ್ಥತೆ |
| **ಕಳಪೆ (201–300)** | ದೀರ್ಘಕಾಲಿಕಒಡ್ಡುವಿಕೆಯಿಂದಜನರಿಗೆ ಉಸಿರಾಟದ ಅಸ್ವಸ್ಥತೆ<br>ಶ್ವಾಸಕೋಶ, ಹೃದಯಕಾಯಿಲೆಯವರು, ಮಕ್ಕಳು ಮತ್ತು ಹಿರಿಯ ವಯಸ್ಕರಿಗೆ ಉಸಿರಾಟದ ಅಸ್ವಸ್ಥತೆ |
| **ಅತಿ ಕಳಪೆ (301–400)** | ದೀರ್ಘಕಾಲಿಕಒಡ್ಡುವಿಕೆಯಿಂದಜನರಿಗೆ ಶ್ವಾಸಕೋಶದಅಸ್ವಸ್ಥತೆ |

| | |
|---|---|
| ತೀವ್ರ (>401) | ಆರೋಗ್ಯವಂತಜನರಿಗೂ ಉಸಿರಾಟದ ಅಸ್ವಸ್ಥತೆ |

## AQI of the CAAQM stations established in Bengaluru City

**Date : 29.9.2021 (Average of past 24 hours)**

| Sl. No. | Station | AQI | Category | Prominent Pollutant |
|---|---|---|---|---|
| 1 | Veterinary College Hebbal | 40 | Good | $PM_{10}$ |
| 2 | Jayanagar 5th Block, Shalini ground | 34 | Good | $O_3$ |
| 3 | KAVIKA, Mysore Road | 195 | Moderate | $PM_{2.5}$ |
| 4 | Rajeev Gandhi Institute of Chest Disease, NIMHANS, Hombegowda Nagar | 34 | Good | $PM_{10}$ |
| 5 | HSR Layout, near Central Silkboard | 72 | Satisfactory | $PM_{10}$ |
| 6 | City Railway Station, Magestic, Bengaluru | 59 | Satisfactory | $PM_{10}$ |
| 7 | Saneguruvanahalli, NisargaBhavan, KSPCB, Shivanagara | 40 | Good | CO |
| **(29.9.2021 at 10.05 AM)** | | | | |
| 8 | BWSSB, Kadabesanahalli | 56 | Satisfactory | $SO_2$ |
| 9 | Peenya | 67 | Satisfactory | $PM_{10}$ |
| 10 | BTM Layout | * | * | * |

| Category (Range) | Possible Health Impacts | Category (Range) | Possible Health Impacts |
|---|---|---|---|
| Good (0–50) | Minimal Impact | Poor (201–300) | Breathing discomfort to people on prolonged exposure |
| Satisfactory (51–100) | Minor breathing discomfort to sensitive people | Very Poor (301–400) | Respiratory illness to the people on prolonged exposure |
| Moderate (101–200) | Breathing discomfort to the people with lung, Heart disease, children and older | Severe (>401) | Respiratory effects even on healthy people |